**All India Radio: Bangalore**
**National Bulletin In Kannada**
**06.02.2025  19.35 p.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**06.02.2025  19.35 p.m.**
*********************

ಮುಖ್ಯಾಂಶಗಳು

೧. ’ರಾಷ್ಟ್ರ ಮೊದಲು’ ಎಂಬುದು ಕೇಂದ್ರ ಸರ್ಕಾರದ ಅಭಿವೃದ್ಧಿ ಮಾದರಿ - ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಯಲ್ಲಿ ಪ್ರಧಾನಿ ನರೇಂದ್ರ ಮೋದಿ

೨. ಅಕ್ರಮ ವಲಸಿಗರ ಗಡಿಪಾರು ಹೊಸದಲ್ಲ, ಸಾಮಾನ್ಯ ಪ್ರಕ್ರಿಯೆ - ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್

೩. ಮಹಾಕುಂಭ ಮೇಳದಲ್ಲಿ ಜನಜಾತಿಯ ಯುವ ಕುಂಭ ಆಯೋಜನೆ

೪. ೩೮ನೇ ರಾಷ್ಟ್ರೀಯ ಕ್ರೀಡಾಕೂಟ; ಪುರುಷರ ೫೦ ಮೀಟರ್ ರೈಫಲ್ ಸ್ಪರ್ಧೆಯಲ್ಲಿ ನೀರಜ್ ಕುಮಾರ್‌ಗೆ ಚಿನ್ನ

೫. ಏಕದಿನ ಕ್ರಿಕೆಟ್: ಭಾರತಕ್ಕೆ ೨೪೯ ರನ್‌ಗಳ ಗುರಿ ನೀಡಿದ ಇಂಗ್ಲೆಂಡ್

*****************

’ರಾಷ್ಟ್ರ ಮೊದಲು’ ಎಂಬುದು ಕೇಂದ್ರ ಸರ್ಕಾರದ ಅಭಿವೃದ್ಧಿ ಮಾದರಿಯಾಗಿದೆ. ಇದು ಸಮಾಧಾನಪಡಿಸುವಿಕೆಯ ಮೇಲೆ ಅಲ್ಲ, ಬದಲಾಗಿ ತೃಪ್ತಿಯ ಮೇಲೆ ಕೇಂದ್ರೀಕೃತವಾಗಿದೆ. ಜನರು ಈ ಮಾದರಿಯನ್ನು ಪರೀಕ್ಷಿಸಿದ್ದಾರೆ, ಅರ್ಥಮಾಡಿಕೊಂಡಿದ್ದಾರೆ ಮತ್ತು ಬೆಂಬಲಿಸಿದ್ದಾರೆ. ಆದ್ದರಿಂದ ತಮ್ಮ ಸರ್ಕಾರಕ್ಕೆ ಮೂರನೇ ಬಾರಿಗೆ ಜನಾದೇಶ ನೀಡಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದರು.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ಮೇಲಿನ ವಂದನಾ ನಿರ್ಣಯ ಸಂಬಂಧ ರಾಜ್ಯಸಭೆಯಲ್ಲಿ ನಡೆದ ಚರ್ಚೆಯಲ್ಲಿ ಉತ್ತರಿಸಿದ ಪ್ರಧಾನಿ, ’ಸಬ್ಕಾ ಸಾಥ್, ಸಬ್ಕಾ ವಿಕಾಸ್’ ಮಾದರಿ ಆಡಳಿತವು ಕಾಂಗ್ರೆಸ್‌ಗೆ ಅರ್ಥವಾಗುವುದಿಲ. ಏಕೆಂದರೆ ಇಡೀ ಪಕ್ಷವು ಒಂದು ಕುಟುಂಬಕ್ಕೆ ಸಮರ್ಪಿತವಾಗಿದೆ. ’ವಂಚನೆ, ಸಮಾಧಾನ ಮತ್ತು ಸ್ವಜನಪಕ್ಷಪಾತ’ ಮಾದರಿಯನ್ನು ಕಾಂಗ್ರೆಸ್ ಅನುಸರಿಸುತ್ತಿದೆ ಎಂದು ಆರೋಪಿಸಿದರು.

ತಮ್ಮ ಸರ್ಕಾರ ಕೌಶಲ್ಯ ಅಭಿವೃದ್ಧಿ, ಆರ್ಥಿಕ ಉನ್ನತಿ ಮತ್ತು ಕೈಗಾರಿಕೀಕರಣಕ್ಕೆ ಆದ್ಯತೆ ನೀಡಿದೆ ಎಂದು ಅವರು ಹೇಳಿದರು.

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ಕಾಂಗ್ರೆಸ್ ದ್ವೇಷಿಸುತ್ತಿದೆ. ಅವರ ಚುನಾವಣಾ ಸೋಲಿಗೆ ಕಾಂಗ್ರೆಸ್ ಕಾರಣವಾಗಿದೆ ಎಂದು ಆರೋಪಿಸಿದ ಅವರು, ಬಾಬಾ ಸಾಹೇಬ್ ಅವರನ್ನು ಭಾರತ ರತ್ನ ಪ್ರಶಸ್ತಿಗೆ ಅರ್ಹರೆಂದು ಕಾಂಗ್ರೆಸ್ ಎಂದಿಗೂ ಪರಿಗಣಿಸಿಲ್ಲ ಎಂದು ಪ್ರಧಾನಿ ದೂರಿದರು.

ಕೇಂದ್ರ ಸರ್ಕಾರವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಪರ ಕಾನೂನುಗಳನ್ನು ಬಲಪಡಿಸಿದೆ. ದಿವ್ಯಾಂಗರ ಕಲ್ಯಾಣಕ್ಕಾಗಿ ಶ್ರಮಿಸುತ್ತಿದೆ. ತೃತೀಯಲಿಂಗಿ ಸಮುದಾಯಕ್ಕೆ ಕಾನೂನು ಹಕ್ಕುಗಳನ್ನು ಖಚಿತಪಡಿಸಿದೆ. ಒಬಿಸಿ ಆಯೋಗಕ್ಕೆ ಸಾಂವಿಧಾನಿಕ ಸ್ಥಾನಮಾನ ನೀಡುವ ಮೂಲಕ ಇತರೆ ಹಿಂದುಳಿದ  ಸಮುದಾಯಗಳ ದೀರ್ಘಕಾಲದಿಂದ ಬಾಕಿ ಉಳಿದಿದ್ದ ಬೇಡಿಕೆಯನ್ನು ತಮ್ಮ ಸರ್ಕಾರ ಈಡೇರಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಧ್ವನಿ: ಪ್ರಧಾನಿ ೩೦ ಸೆಕೆಂಡ್

*****************

ಅಕ್ರಮ ವಲಸಿಗರನ್ನು ಗಡೀಪಾರು ಮಾಡುವ ಪ್ರಕ್ರಿಯೆಯು ಅಂತಾರಾಷ್ಟ್ರೀಯ ಸಂಬಂಧಗಳಲ್ಲಿ ಸಾಮಾನ್ಯವಾಗಿ ಅಂಗೀಕರಿಸಲ್ಪಟ್ಟ ಪ್ರಕ್ರಿಯೆಯಾಗಿದೆ. ಕಾನೂನು ಚಲನಶೀಲತೆಯನ್ನು ಹೆಚ್ಚಿಸುವುದು ರಾಷ್ಟ್ರಗಳ ಸಾಮೂಹಿಕ ಹಿತಾಸಕ್ತಿಯಾಗಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಪ್ರತಿಪಾದಿಸಿದರು.

ಅಮೆರಿಕದಿಂದ ಭಾರತೀಯ ಪ್ರಜೆಗಳನ್ನು ಗಡೀಪಾರು ಮಾಡಿರುವ ಕುರಿತು ರಾಜ್ಯಸಭೆಯಲ್ಲಿ ಮಾತನಾಡಿದ ಅವರು, ಇತರೆ ದೇಶಗಳಲ್ಲಿ ಅಕ್ರಮವಾಗಿ ವಾಸಿಸುತ್ತಿರುವುದು ಕಂಡುಬಂದರೆ, ರಾಷ್ಟ್ರಗಳು ತಮ್ಮ ನಾಗರಿಕರನ್ನು ವಾಪಸ್ ಕರೆದುಕೊಂಡು ಹೋಗುವುದು ಕಡ್ಡಾಯವಾಗಿದೆ ಎಂದು ಅವರು ಹೇಳಿದರು.

ಗಡೀಪಾರು ಮಾಡುವ ಪ್ರಕ್ರಿಯೆಯು ಹೊಸದಲ್ಲ. ಇದು ಮಿಲಿಟರಿ ಮತ್ತು ನಾಗರಿಕ ವಿಮಾನಗಳನ್ನು ಬಳಸುವ ನಿರಂತರ ಪ್ರಕ್ರಿಯೆಯಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

೨೦೦೯ ರಲ್ಲಿ ೭೩೪ ಜನರನ್ನು ಭಾರತಕ್ಕೆ ಗಡೀಪಾರು ಮಾಡಲಾಗಿದೆ. ೨೦೨೪ ರಲ್ಲಿ ೧ ಸಾವಿರದ ೩೬೮ ಜನರನ್ನು ಮತ್ತು ಈ ವರ್ಷ ೧೦೪ ಜನರನ್ನು ಗಡೀಪಾರು ಮಾಡಲಾಗಿದೆ ಎಂದು ತಿಳಿಸಿದರು.

ಗಡೀಪಾರು ಮಾಡಿದವರಿಗೆ ಯಾವುದೇ ರೀತಿಯ ದೌರ್ಜನ್ಯವಾಗದಂತೆ ನೋಡಿಕೊಳ್ಳಲು ಭಾರತ ಸರ್ಕಾರ, ಅಮೆರಿಕ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದೆ ಎಂದು ಅವರು ಹೇಳಿದರು.

ಧ್ವನಿ: ಡಾ.ಎಸ್.ಜೈಶಂಕರ್  ೨೧ ಸೆಕೆಂಡ್

ಗಡೀಪಾರು ಪ್ರಕ್ರಿಯೆಯು ಪ್ರಮಾಣಿತ ಕಾರ್ಯಾಚರಣಾ ವಿಧಾನವನ್ನು ಅನುಸರಿಸುತ್ತದೆ. ಈ ಪ್ರಕ್ರಿಯೆ ಹೊಸತಲ್ಲ ಎಂದು ಡಾ. ಎಸ್.ಜೈಶಂಕರ್ ಸ್ಪಷ್ಟಪಡಿಸಿದರು.

ವಿದೇಶಾಂಗ ಸಚಿವರ ಹೇಳಿಕೆಗೆ ಪ್ರತಿಕ್ರಿಯಿಸಿದ ಕಾಂಗ್ರೆಸ್ ಸದಸ್ಯ ರಣದೀಪ್ ಸಿಂಗ್ ಸುರ್ಜೇವಾಲಾ, ಅಮೆರಿಕವು ಇದೇ ರೀತಿಯಲ್ಲಿ ಏಳು ಲಕ್ಷಕ್ಕೂ ಹೆಚ್ಚು ಭಾರತೀಯರನ್ನು ಗಡೀಪಾರು ಮಾಡಲು ಯೋಜಿಸುತ್ತಿದೆ ಎಂದು ಹೇಳಿದರು.

ಅಮೆರಿಕದಲ್ಲಿ ಅಂತಹ ಎಷ್ಟು ಭಾರತೀಯ ಪ್ರಜೆಗಳನ್ನು ಜೈಲುಗಳಲ್ಲಿ ಇರಿಸಲಾಗಿದೆ ಮತ್ತು ಅವರಿಗೆ ಕಾನೂನು ನೆರವು ನೀಡಲಾಗಿದೆಯೇ ಎಂಬುದರ ಕುರಿತು ಸರ್ಕಾರವು ಸದನಕ್ಕೆ ತಿಳಿಸಬೇಕು ಎಂದು ಅವರು ಒತ್ತಾಯಿಸಿದರು.

*****************

ದೇಶದ ಹೊರಗೆ ಕಲಿಯುತ್ತಿರುವ ಭಾರತೀಯ ವಿದ್ಯಾರ್ಥಿಗಳ ಸುರಕ್ಷತೆ ಮತ್ತು ಕಲ್ಯಾಣವು ಸರ್ಕಾರದ ಆದ್ಯತೆಯಾಗಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ.

ರಾಜ್ಯಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಸಂಘರ್ಷ ವಲಯಗಳಿಂದ ಹಿಂದಿರುಗಿದ ಭಾರತೀಯ ವಿದ್ಯಾರ್ಥಿಗಳ ಹಿತಾಸಕ್ತಿಗಳನ್ನು ರಕ್ಷಿಸಲು ಸರ್ಕಾರ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ ಎಂದು ತಿಳಿಸಿದರು.

ಸಂಘರ್ಷ ವಲಯಗಳಿಂದ ನೂರಾರು ವಿದ್ಯಾರ್ಥಿಗಳನ್ನು ಕೇಂದ್ರ ಸರ್ಕಾರವು ಮರಳಿ ಕರೆತಂದಿದೆ. ಉಕ್ರೇನ್‌ನ ವೈದ್ಯಕೀಯ ವಿದ್ಯಾರ್ಥಿಗಳು ತಮ್ಮ ಶಿಕ್ಷಣ ಕಾರ್ಯಕ್ರಮಗಳನ್ನು ಮೂರನೇ ದೇಶಕ್ಕೆ ವರ್ಗಾಯಿಸಲು ಸರ್ಕಾರ ಅವಕಾಶ ಮಾಡಿಕೊಟ್ಟಿದೆ ಮತ್ತು ಭಾರತದಲ್ಲಿ ಪ್ರಾಯೋಗಿಕ ಪರೀಕ್ಷೆಗಳಿಗೆ ಅವಕಾಶ ನೀಡಿದೆ ಎಂದರು.

ದೇಶದಲ್ಲಿ ಕಳೆದ ೧೦ ವರ್ಷಗಳಲ್ಲಿ ೭೫ ಸಾವಿರ ಹೆಚ್ಚುವರಿ ವೈದ್ಯಕೀಯ ಸೀಟುಗಳನ್ನು ಸೃಷ್ಟಿಸಲಾಗಿದೆ. ಸಂಘರ್ಷ ವಲಯಗಳಿಂದ ಮರಳಿ ಬಂದ ವಿದ್ಯಾರ್ಥಿಗಳಿಗೆ ಹಲವಾರು ಅವಕಾಶಗಳನ್ನು ಒದಗಿಸಲಾಗಿದೆ ಎಂದು ಸಚಿವ ಡಾ. ಎಸ್.ಜೈಶಂಕರ್ ಹೇಳಿದರು.

*****************

ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳದಲ್ಲಿ ಇಂದು ಜನಜಾತಿಯ ಸಾಂಸ್ಕೃತಿಕ ಸಮಾಗಮ ೨೦೨೫ ರ ಅಡಿಯಲ್ಲಿ ಜನಜಾತಿಯ ಯುವ ಕುಂಭವನ್ನು ಆಯೋಜಿಸಲಾಗಿತ್ತು. ದೇಶಾದ್ಯಂತ ಎಂಟು ಸಾವಿರಕ್ಕೂ ಹೆಚ್ಚು ಬುಡಕಟ್ಟು ಯುವಕರು, ಯುವ ಕುಂಭದಲ್ಲಿ ಭಾಗವಹಿಸಿದ್ದರು.

ಬಿರ್ಸಾ ಮುಂಡಾ ಅವರ ೧೫೦ನೇ ಜನ್ಮ ದಿನಾಚರಣೆಯ ಸ್ಮರಣಾರ್ಥ ೨೦೨೫ ನೇ ವರ್ಷವನ್ನು ಜನಜಾತಿಯ ಗೌರವ ವರ್ಷ ಎಂದು ಘೋಷಿಸಲಾಗಿದೆ. ಈ ಆಚರಣೆಯ ಭಾಗವಾಗಿ, ಮಹಾಕುಂಭದಲ್ಲಿ ಐದು ದಿನಗಳ ಜನಜಾತಿಯ ಸಾಂಸ್ಕೃತಿಕ ಸಮಾಗಮವನ್ನು ಆಯೋಜಿಸಲಾಗಿದೆ.

ಯುವ ಕುಂಭದ ಸಂದರ್ಭದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಬುಡಕಟ್ಟು ವ್ಯವಹಾರಗಳ ರಾಜ್ಯ ಸಚಿವ ದುರ್ಗಾದಾಸ್ ಉಯಿಕೆ, ದೇಶದ ಯುವಕರು ಸಮಾಜದಲ್ಲಿ ಕ್ರಾಂತಿಕಾರಿ ಬದಲಾವಣೆಗಳನ್ನು ತರುತ್ತಾರೆ. ಸಾಮಾಜಿಕ ಸಾಮರಸ್ಯದ ಕಡೆಗೆ ಕೆಲಸ ಮಾಡಲು ಮತ್ತು ದೇಶವನ್ನು ಸ್ವಾವಲಂಬಿಯನ್ನಾಗಿ ಮಾಡಲು ಯುವಕರು ಶ್ರಮಿಸಬೇಕು ಎಂದು ಹೇಳಿದರು.

ಮಹಾಕುಂಭಮೇಳದಲ್ಲಿ ಬುಡಕಟ್ಟು ಸಮಾಜಕ್ಕೆ ಸಂಬಂಧಿಸಿದ ಪ್ರದರ್ಶನವನ್ನು ಆಯೋಜಿಸಲಾಗಿದ್ದು, ದೇಶಾದ್ಯಂತ ೧೨೦ ಸಾಂಸ್ಕೃತಿಕ ನೃತ್ಯ ಗುಂಪುಗಳು ಭಾಗವಹಿಸಿ, ತಮ್ಮ ಕಲೆಯನ್ನು ಪ್ರದರ್ಶಿಸುತ್ತಿವೆ.

******************

ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿವರ್ಷವೂ, ಪರೀಕ್ಷೆಗಳನ್ನು ಎದುರಿಸುವ ಕುರಿತಂತೆ ವಿದ್ಯಾರ್ಥಿಗಳೊಂದಿಗೆ ನಡೆಸುವ ಸಂವಾದ ಕಾರ್ಯಕ್ರಮ ಪರೀಕ್ಷಾ ಪೇ ಚರ್ಚಾ ಇದೇ ೧೦ ರಂದು ಬೆಳಗ್ಗೆ ೧೧ ಗಂಟೆಗೆ ಜರುಗಲಿದೆ.

ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಳ್ಳಲಿದ್ದು, ಈ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಪರೀಕ್ಷಾ ಸಿದ್ಧತೆ, ಒತ್ತಡ ನಿರ್ವಹಣೆ ಮತ್ತು ವೈಯಕ್ತಿಕ ಬೆಳವಣಿಗೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ. ಈ ವರ್ಷ ಪ್ರತಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದಿಂದ ೩೬ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಇವರಲ್ಲಿ ಕಲಾ ಉತ್ಸವ ಮತ್ತು ವೀರ ಗಾಥಾ ಕಾರ್ಯಕ್ರಮದ ವಿಜೇತರೂ ಸೇರಿದ್ದಾರೆ.

******************

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ನಾಳೆ ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದಾರೆ. ಒಂದು ದಿನದ ಪ್ರವಾಸದ ಭಾಗವಾಗಿ ಅವರು, ರಾಣೆಬೆನ್ನೂರಿಗೆ ಭೇಟಿ ನೀಡಲಿದ್ದು, ಅಲ್ಲಿ ಅವರು, ಕರ್ನಾಟಕ ವೈಭವ ಸಾಹಿತ್ಯ ಮತ್ತು ಸಾಂಸ್ಕೃತಿಕ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

******************

ಏಷ್ಯಾದ ಅತಿದೊಡ್ಡ ಏರೋ ಶೋ - ಏರೋ ಇಂಡಿಯಾ ೨೦೨೫ರ ೧೫ನೇ ಆವೃತ್ತಿಯು ಬೆಂಗಳೂರಿನ ಯಲಹಂಕದ ವಾಯುಪಡೆ ನಿಲ್ದಾಣದಲ್ಲಿ ಇದೇ ೧೦ ರಿಂದ ೧೪ ರವರೆಗೆ ನಡೆಯಲಿದೆ.

‘ದಿ ರನ್ ವೇ ಟು ಎ ಬಿಲಿಯನ್ ಆಪರ್ಚುನಿಟೀಸ್’ ಎಂಬ ಘೋಷ್ಯವಾಕ್ಯದೊಂದಿಗೆ, ಈ ಕಾರ್ಯಕ್ರಮವು ವಿದೇಶಿ ಮತ್ತು ಭಾರತೀಯ ಸಂಸ್ಥೆಗಳ ನಡುವೆ ಸಹಭಾಗಿತ್ವವನ್ನು ರೂಪಿಸಲು ಮತ್ತು ಸ್ವದೇಶೀಕರಣ ಪ್ರಕ್ರಿಯೆಯನ್ನು ವೇಗಗೊಳಿಸಲು ವೇದಿಕೆ ಕಲ್ಪಿಸಲಿದೆ.

ಕಾರ್ಯಕ್ರಮದ ಮೊದಲ ಮೂರು ದಿನಗಳು ವಾಣಿಜ್ಯ ವ್ಯವಹಾರದ ದಿನಗಳಾಗಿದ್ದು, ೧೩ ಮತ್ತು ೧೪ ರಂದು ಪ್ರದರ್ಶನವನ್ನು ಸಾರ್ವಜನಿಕರು ವೀಕ್ಷಿಸಲು ಅನುವು ಮಾಡಿಕೊಡಲಾಗಿದೆ.

ಉದ್ಘಾಟನಾ ಕಾರ್ಯಕ್ರಮ, ರಕ್ಷಣಾ ಸಚಿವರ ಸಮಾವೇಶ, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ದುಂಡು ಮೇಜಿನ ಸಭೆ, ’ಮಂಥನ’ ಸ್ಟಾರ್ಟ್‌ಅಪ್ ಕಾರ್ಯಕ್ರಮ, ಏರ್ ಶೋಗಳು, ಭಾರತೀಯ ಮಳಿಗೆ ಒಳಗೊಂಡ ದೊಡ್ಡ ಪ್ರದರ್ಶನ ಮತ್ತು ವಾಯುಯಾನ ಕಂಪನಿಗಳ ವ್ಯಾಪಾರ ಮೇಳವನ್ನು ಇದು ಒಳಗೊಂಡಿದೆ.

******************

ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ನಡೆಯುತ್ತಿರುವ ೩೮ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ, ಪುರುಷರ ೫೦ ಮೀಟರ್ ರೈಫಲ್ ತ್ರೀ ಪೊಸಿಷನ್ಸ್ ಸ್ಪರ್ಧೆಯಲ್ಲಿ ಸರ್ವಿಸಸ್‌ನ ನೀರಜ್ ಕುಮಾರ್ ಚಿನ್ನದ ಪದಕ ವಿಜೇತರಾಗಿದ್ದಾರೆ.

ಇದೇ ವೇಳೆ ಮಧ್ಯಪ್ರದೇಶದ ಐಶ್ವರ್ಯ ಪ್ರತಾಪ್ ಸಿಂಗ್ ತೋಮರ್ ಬೆಳ್ಳಿ ಮತ್ತು ಮಹಾರಾಷ್ಟ್ರದ ಸ್ವಪ್ನಿಲ್ ಸುರೇಶ್ ಕುಸಾಲೆ ಕಂಚಿನ ಪದಕ ಗೆದ್ದರು.

ಏತನ್ಮಧ್ಯೆ, ೧೦ ಮೀಟರ್ ಏರ್ ಪಿಸ್ತೂಲ್ ಮಿಶ್ರ ತಂಡ ಸ್ಪರ್ಧೆಯಲ್ಲಿ ಹರಿಯಾಣದ ಸುರುಚಿ ಮತ್ತು ಪ್ರಮೋದ್ ಚಿನ್ನ ಗೆದ್ದಿದ್ದು, ರಾಜಸ್ಥಾನ ತಂಡ ಬೆಳ್ಳಿ ಮತ್ತು ಮಹಾರಾಷ್ಟ್ರ ತಂಡ ಕಂಚಿನ ಪದಕ ವಿಜೇತವಾಗಿದೆ.

ಪದಕ ಪಟ್ಟಿಯಲ್ಲಿ ೨೯ ಚಿನ್ನದ ಪದಕಗಳೊಂದಿಗೆ ಕರ್ನಾಟಕ ಅಗ್ರ ಸ್ಥಾನದಲ್ಲಿದೆ. ನಂತರ ೨೮ ಚಿನ್ನದ ಪದಕಗಳೊಂದಿಗೆ ಸರ್ವಿಸಸ್ ದ್ವಿತೀಯ ಸ್ಥಾನದಲ್ಲಿದೆ.

******************

ಮಹಾರಾಷ್ಟ್ರದ ನಾಗ್ಪುರದ ವಿದರ್ಭ ಕ್ರಿಕೆಟ್ ಅಸೋಸಿಯೇಷನ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಏಕದಿನ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ಮುಖಾಮುಖಿಯಾಗಿವೆ.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್ ತಂಡ, ೪೭.೪ ಓವರ್‌ಗಳಲ್ಲಿ ೨೪೮ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು.

ಈ ಗುರಿಯನ್ನು ಬೆನ್ನತ್ತಿರುವ ಭಾರತ, ಇತ್ತೀಚಿನ ವರದಿ ಬಂದಾಗ, ೨೮ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ  ೧೮೪ ರನ್ ಮಾಡಿ ಆಡುತ್ತಿದೆ.

*********ಮುಕ್ತಾಯ*********